ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

---

**ಸಂಖ್ಯೆ:, ಸಿ4(6) ಶೈ.ವ.ಪ್ರಾ-01/2022-23.** **ದಿನಾಂಕ: 28/10/2022**

**ಸುತ್ತೋಲೆ**

ವಿಷಯ: ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 2022-23 ನೇ ಸಾಲಿನ ಮೊದಲನೆಯ ಸಮುದಾಯದತ್ತ ಶಾಲಾ ಕಾರ್ಯಕ್ರಮದ ದಿನಾಂಕಗಳನ್ನು ಮುಂದೂಡಿ, ಮರು-ನಿಗದಿಪಡಿಸಿರುವ ಕುರಿತು.

ಉಲ್ಲೇಖ:-1. ಈ ಕಛೇರಿಯ ಇದೇ ಸಮ ಸಂಖ್ಯೆಯ ಸುತ್ತೋಲೆ ಪತ್ರ ದಿನಾಂಕ: 06.04.2022.

2. ಈ ಕಛೇರಿಯ ಜ್ಞಾಪನ ಪತ್ರ ಸಂಖ್ಯೆ: ನಿ ಆ ಶಾ 01 / 2022-23, ದಿನಾಂಕ: 15.10.2022.

**********

ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 2022-23 ನೇ ಸಾಲಿನ ಮೊದಲನೆಯ ಸಮುದಾಯದತ್ತ ಶಾಲಾ ಕಾರ್ಯಕ್ರಮವನ್ನು ಕ್ರಮವಾಗಿ ದಿನಾಂಕ: 29.10.2022 ಮತ್ತು 31.10.2022 ಗಳಂದು ಉಲ್ಲೇಖ-01 ರ ಅನುಸಾರ ನಿಗದಿಪಡಿಸಲಾಗಿತ್ತು.

ಪ್ರಸ್ತುತ ರಾಜ್ಯದ ಶಾಲೆಗಳಲ್ಲಿ ಸಂಕಲನಾತ್ಮಕ ಮೌಲ್ಯಮಾಪನ-1 (ಎಸ್.ಎ-1) ಕಾರ್ಯಚಟುವಟಿಕೆಯನ್ನು ಉಲ್ಲೇಖ-02 ರ ಅನುಸಾರ ಮುಂದೂಡಲಾಗಿದ್ದು, ಶಾಲಾ ವಿದ್ಯಾರ್ಥಿಗಳ ಕಲಿಕಾ ಪ್ರಗತಿಯ ವಿಶ್ಲೇಷಣಾ ವರದಿ ಪ್ರಸ್ತುತ ಅಲಭ್ಯವಾಗುವುದರಿಂದ ಅದರ ಆಧಾರದ ಮೇಲೆ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮೇಲ್ಕಂಡ ದಿನಾಂಕಗಳಂದು ಕೈಗೊಳ್ಳಬೇಕಾಗಿರುವ 2022-23 ನೇ ಸಾಲಿನ ಮೊದಲನೆಯ ಸಮುದಾಯದತ್ತ ಶಾಲಾ ಕಾರ್ಯಕ್ರಮವನ್ನು ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಪ್ರಾಥಮಿಕ ಶಾಲೆಗಳಲ್ಲಿ ದಿನಾಂಕ: 28.11.2022 ರಂದು ಮತ್ತು ರಾಜ್ಯದ ಎಲ್ಲಾ ಪ್ರೌಢ ಶಾಲೆಗಳಲ್ಲಿ 30.11.2022 ರಂದು ನಿರ್ವಹಿಸಲು ಸೂಚಿಸಿ, ದಿನಾಂಕವನ್ನು ಮರು-ನಿಗದಿಪಡಿಸಿದ್ದು, ಅದರಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಮತ್ತು ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಮುಖ್ಯಸ್ಥರಿಗೆ ತಿಳಿಸಲಾಗಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

**ಇವರಿಗೆ:-**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಉಪನಿರ್ದೇಶಕರು (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ ಮೇಲ್ಕಂಡಂತೆ ಕ್ರಮವಹಿಸಲು ತಿಳಿಸಿದೆ.

2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯಾ ಉಪನಿರ್ದೇಶಕರು(ಆಡಳಿತ) ಇವರ ಮೂಲಕ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ,
3. ರಾಜ್ಯದ ಎಲ್ಲಾ ಶಾಲಾ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ) ಮುಂದಿನ ಕ್ರಮಕ್ಕಾಗಿ,

**ಪ್ರತಿಯನ್ನು ಮಾಹಿತಿಗಾಗಿ,**

1. ಮಾನ್ಯ ಪ್ರಾಥಮಿಕ, ಪ್ರೌಢ ಶಿಕ್ಷಣ ಮತ್ತು ಸಕಲಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಗೌರವಪೂರ್ವಕವಾಗಿ ಸಲ್ಲಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಲಾಗಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ & ಸಾಕ್ಷರತಾ ಇಲಾಖೆ, 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ಇವರಿಗೆ ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.
10. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
11. ಜಂಟಿ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.
12. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹ / ಜಂಟಿ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
13. ಎಲ್ಲ ಪ್ರಾಂಶುಪಾಲರು ಸಿ.ಟಿ.ಇ. ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
15. ಹಿರಿಯ ಸಹಾಯಕ ನಿರ್ದೇಶಕರು(ಇ–ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.
16. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಶಿಕ್ಷಣ ವಾರ್ತೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಶಿಕ್ಷಣ ವಾರ್ತೆಯ ನವೆಂಬರ್ ಸಂಚಿಕೆಯಲ್ಲಿ ಪ್ರಕಟಿಸಲು ತಿಳಿಸಿದೆ.
17. ಕಛೇರಿ ಪ್ರತಿ.